159ನೇ ಅ

(37)

25

<u>**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಸವರಾಜ ಎಸ್. ಹೊರಟ್ಟಿ, ಇವರು ನಿಯಮ 330 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ:37ಕ್ಕೆ ಉತ್ತರ**</u>

**ಪ್ರಸ್ತಾಪಿಸಿರುವ ವಿಷಯ:**

"ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ದಿನಾಂಕ:01.04.2006ರಂದು ಅಥವಾ ನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ನೌಕರರನ್ನು ಸರಕಾರದ ಆದೇಶ ಸಂಖ್ಯೆ: ಆಇ-ಪಿಇಎನ್-99/2023, ದಿನಾಂಕ:24.01.2024ರ ಪ್ರಕಾರ ಹಳೆಯ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸಿದ್ದು, ಅದೇ ರೀತಿಯಾಗಿ ದಿನಾಂಕ:01.04.2006ರ ಪೂರ್ವದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಅನುಮತಿಯೊಂದಿಗೆ ಹೊರಡಿಸಲಾಗಿರುವ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ದಿನಾಂಕ: 01.04.2006ರ ನಂತರದಲ್ಲಿ ನೇಮಕಾತಿ ಅನುಮೋದನೆಗೊಂಡಿರುವ ಅನುದಾನಿತ ಪ್ರಾಥಮಿಕ, ಪ್ರೌಢ ಶಾಲಾ ಸಹಶಿಕ್ಷಕರುಗಳನ್ನು ಹಾಗೂ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳನ್ನು ಸಹ ಹಳೆಯ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸಲು ಸರ್ಕಾರವನ್ನು ಒತ್ತಾಯಿಸುವ ಕುರಿತು ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ".

**ಉತ್ತರ:**

ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರವರು ರಚಿಸಿದ ಸಮಿತಿಯ ವರದಿಯ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ:01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ:31.03.2006 ರನ್ವಯ ದಿನಾಂಕ:01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ.

ರಾಜ್ಯದ ಸ್ವಾಯತ್ತ ಸಂಸ್ಥೆಗಳು, ನಿಗಮ-ಮಂಡಳಿಗಳು, ಸಂಘಗಳು, ವಿಶ್ವವಿದ್ಯಾನಿಲಯಗಳು, ರಾಜ್ಯದ ಅನುದಾನಿತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೂ ಸಹ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ: 01.04.2006 ರಿಂದ ಜಾರಿಗೆ ಬರುವಂತೆ ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ (ವಿ) 209 ಪಿಇಎನ್ 2012, ದಿನಾಂಕ: 21.02.2015ರಲ್ಲಿ ವಿಸ್ತರಿಸಲಾಗಿದೆ.

ದಿನಾಂಕ: 24.01.2024ರ ಸರ್ಕಾರಿ ಆದೇಶವು ರಾಜ್ಯ ಸರ್ಕಾರದ ಸಿವಿಲ್ ಸೇವೆಯಲ್ಲಿನ ಹುದ್ದೆಗಳಿಗೆ ಸೇರಿದ ಸರ್ಕಾರಿ ನೌಕರರಿಗೆ ಮಾತ್ರ ಅನ್ವಯವಾಗುವುದರಿಂದ, ನಿಗಮ/ಮಂಡಳಿ/ವಿಶ್ವವಿದ್ಯಾಲಯಗಳು/ ಅನುದಾನಿತ ಸಂಸ್ಥೆಗಳು/ಇತರ ಸ್ವಾಯತ್ತ ಸಂಸ್ಥೆಗಳ ನೌಕರರಿಗೆ ಸದರಿ ಆದೇಶವು ಅನ್ವಯವಾಗುವುದಿಲ್ಲ. ಅನುದಾನಿತ ಪ್ರಾಥಮಿಕ, ಪ್ರೌಢ ಶಾಲಾ ಸಹಶಿಕ್ಷಕರುಗಳು ಹಾಗೂ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳು ಸಹ ಅನುದಾನಿತ ಸಂಸ್ಥೆಗಳ ವ್ಯಾಪ್ತಿಗೆ ಬರುವುದರಿಂದ ಸರ್ಕಾರದ ಆದೇಶ ಸಂಖ್ಯೆ: ಆಇ-ಪಿಇಎನ್-99/2023, ದಿನಾಂಕ:24.01.2024ರ ಆದೇಶವು ಸದರಿ ನೌಕರರುಗಳಿಗೆ ಅನ್ವಯವಾಗುವುದಿಲ್ಲ.

ಮುಂದುವರೆದು, ರಾಜ್ಯದಲ್ಲಿ ಜಾರಿಯಲ್ಲಿರುವ ರಾಷ್ಟ್ರೀಯ ಪಿಂಚಣಿ ಯೋಜನೆಗೆ ಸೂಕ್ತ ಬದಲಾವಣೆ / ಮಾರ್ಪಾಡು ಮಾಡಲು ಸಮಗ್ರವಾಗಿ ಪರಿಶೀಲಿಸಲು ಈಗಾಗಲೇ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 11.12.2018ರ ಮತ್ತು ದಿನಾಂಕ: 01.03.2023ರ ಸರ್ಕಾರಿ ಆದೇಶಗಳನ್ವಯ ರಚಿಸಲಾಗಿರುವ ಸಮಿತಿಯನ್ನು ದಿನಾಂಕ:16.08.2024ರಲ್ಲಿ ಪುನರ್ ರಚಿಸಿ ಆದೇಶಿಸಲಾಗಿದ್ದು, ಸದರಿ ಸಮಿತಿಯ ವರದಿಯು ನಿರೀಕ್ಷಣೆಯಲ್ಲಿರುತ್ತದೆ.

<u>**ಸಂಖ್ಯೆ: ಆಇ-ಪಿಇಎನ್/187/2026**</u>

**(ಡಿ.ಕೆ. ಶಿವಕುಮಾರ್)**

ಮುಖ್ಯಮಂತ್ರಿ